# ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 157 ಯುಕೆವಿ 2008

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:17-9-2008

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಉನ್ನತ ಶಿಕ್ಷಣ),
ಶಿಕ್ಷಣ ಇಲಾಖೆ, ಬೆಂಗಳೂರು – 560 001.

ಇವರಿಗೆ
ಕುಲಸಚಿವರು,
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.

ಮಾನ್ಯರೆ,

ವಿಷಯ:- 2008-09ನೇ ಶೈಕ್ಷಣಿಕ ಸಾಲಿನಿಂದ ಹುಬ್ಬಳ್ಳಿಯ ಯುರೇಕಾ ಸೆಂಟರ್ ಇನ್ಸಿಟಿಟ್ಯೂಟ್ ಆಫ್ ಎಕ್ಷಲೆನ್ಸ್ ಇನ್ ಮ್ಯಾನೇಜ್‌ಮೆಂಟ್ ಸೈನ್ಸ್‌ನ ಎಂ.ಬಿ.ಎ. ಕೋರ್ಸಿಗೆ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ:- ತಮ್ಮ ಪತ್ರ ಸಂಖ್ಯೆ:ಕವಿವಿ/ಸಿಡಿಸಿ/ಸಂಯೋಜನೆ/2007-08/4259, ದಿನಾಂಕ:29-2-2008.

---

ಹುಬ್ಬಳ್ಳಿಯ ಯುರೇಕಾ ಸೆಂಟರ್ ಇನ್ಸಿಟಿಟ್ಯೂಟ್ ಆಫ್ ಎಕ್ಷಲೆನ್ಸ್ ಇನ್ ಮ್ಯಾನೇಜ್‌ಮೆಂಟ್ ಸೈನ್ಸ್‌ನಲ್ಲಿ 2008-09ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಎಂ.ಬಿ.ಎ. ಕೋರ್ಸನ್ನು ಪ್ರಾರಂಭಿಸಲು ಸಂಯೋಜನೆ ಕೋರಿ ಕರ್ನಾಟಕ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ಕರ್ನಾಟಕ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

2) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಹುಬ್ಬಳ್ಳಿಯ ಯುರೇಕಾ ಸೆಂಟರ್ ಇನ್ಸಿಟಿಟ್ಯೂಟ್ ಆಫ್ ಎಕ್ಷಲೆನ್ಸ್ ಇನ್ ಮ್ಯಾನೇಜ್‌ಮೆಂಟ್ ಸೈನ್ಸ್‌ನಲ್ಲಿ ಹೊಸದಾಗಿ ಎಂ.ಬಿ.ಎ. ಕೋರ್ಸನ್ನು ಕೆಳಕಂಡಂತೆ ನಿಗದಿಪಡಿಸಿರುವ ವಿಷಯ ಸಮೂಹ ಮತ್ತು ವಿದ್ಯಾರ್ಥಿ ಪ್ರಮಾಣದೊಂದಿಗೆ 2008-09ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆಯನ್ನು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕ್ರಸಂ. | ಕೋರ್ಸು | ವಿಷಯ ಸಮೂಹ/ಐಚ್ಛಿಕ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | ಎಂ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |

ಷರತ್ತುಗಳು:-

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

..2..